**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ಶ್ರೀ ಮಂಜು, ಕಾರ್ಯದರ್ಶಿ, ಬೇಳೂರು ಗ್ರಾಮ ಪಂಚಾಯತಿ (ಹಾಲಿ ಕೋಟಾ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/562/ಗ್ರಾಪಂಕಾ/2014 ದಿನಾಂಕ: 15-12-2014
2. ಅಪರ ನಿಭಂಧಕರು ವಿಚಾರಣೆಗಳು-10 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/ARE-10/ ENQ-12/2015 Dt:15-02-2016.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/ARE-10/ ENQ-12/2015 Dt:09-03-2016.
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: LOK/ARE-10/ ENQ-12/2015 Dt:10-03-2016.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/138/ಗ್ರಾಪಂಕಾ/2016 ದಿನಾಂಕ:02-11-2016.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮಂಜು, ಕಾರ್ಯದರ್ಶಿ, ಬೇಳೂರು ಗ್ರಾಮ ಪಂಚಾಯತಿ (ಹಾಲಿ ಕೋಟಾ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"ನೀವು ಶ್ರೀ ಮಂಜು, ಕಾರ್ಯದರ್ಶಿ, ಬೇಳೂರು ಗ್ರಾಮ ಪಂಚಾಯತಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗಿ ಪಂಚಾಯಿತಿ ಬ್ಯಾಂಕ್ ಖಾತೆಯಲ್ಲಿ ತಿದ್ದುಪಡಿ ಮಾಡಿ ಅವ್ಯವಹಾರ ಮಾಡಿರುತ್ತೀರೆಂದು, ದಿ:04.05.2007 ರಂದು ಚೆಕ್ ಮುಖೇನ ರೂ. 1,25,000/- ಅನ್ನು ಮುಂಗಡವಾಗಿ ಪಂಚಾಯಿತಿ ವತಿಯಿಂದ ತಾವು ಗುತ್ತಿಗೆದಾರರಿಗೆ ಪಾವತಿಸಿರುವುದಾಗಿ, ಅಳತೆ ಪುಸ್ತಕದಲ್ಲಿ ಗುತ್ತಿಗೆದಾರರ ಹೆಸರನ್ನು ಶ್ರೀ ವಿಶ್ವನಾಥ್ ಶೆಟ್ಟಿ ಎಂದು ನಮೂದಿಸಿರುವುದಾಗಿ, ಶ್ರೀ ಸತೀಶ್ ಶೆಟ್ಟಿಯವರು, ಶ್ರೀ ವಿಶ್ವನಾಥ ಶೆಟ್ಟಿಯವರ ಹೆಸರಿನಲ್ಲಿ ಹಣವನ್ನು ಪಡೆದಿರುತ್ತಾರೆ. ಪಂಚಾಯತಿಯ ಅಧ್ಯಕ್ಷರು ಹಾಗೂ ಕಾರ್ಯದರ್ಶಿಯವರು ಶಾಮೀಲಾಗಿ, ಶ್ರೀ ವಿಶ್ವನಾಥ ಶೆಟ್ಟಿಯವರೊಡಗೂಡಿ ಹಣವನ್ನು ಲಪಟಾಯಿಸಿದ್ದಾರೆಂದು ಗ್ರಾಮ ವಿವರವನ್ನು ನಮೂನೆ-2ರಲ್ಲಿ ಎದುರುದಾರರ ವಾರ್ಷಿಕ ಆದಾಯ ಕೇವಲ ರೂ.15,000/- ಎಂದು ತೋರಿಸಿ ಸುಳ್ಳು ಮಾಹಿತಿ ನೀಡಿರುತ್ತೀರೆಂದು, ಬೇಳೂರು ಹಾಲು ಡೈರಿಯಿಂದ ಬಡಾಬೆಟ್ಟು ಟ್ಯಾಂಕರ್‌ವರೆಗೆ ರೇಸಿಂಗ್ ಮೈನ್ ಹಾಗೂ ಮೋಟಾರನ್ನು ಅಳವಡಿಸುವ ಕಾಮಗಾರಿಗಳನ್ನು ನಿರ್ವಹಿಸದೆ ಸುಳ್ಳು ಬಿಲ್ಲುಗಳನ್ನು ತಯಾರಿಸಿ ಹಣವನ್ನು ಲಪಟಾಯಿಸಿರುತ್ತೀರೆಂದು, ತಾಂತ್ರಿಕ ಮಂಜೂರಾತಿಯಿಲ್ಲದೆ, ಕಾಮಗಾರಿಗಳನ್ನು ನಿರ್ವಹಿಸಿದ್ದಾಗಿ ತೋರಿಸಿ ರೂ. 40,000/- ಮುಂಗಡ ಹಣವನ್ನು ನಿಯಮಬಾಹಿರವಾಗಿ ಪಡೆದು ದುರುಪಯೋಗಪಡಿಸಿಕೊಂಡಿರುತ್ತೀರೆಂದು, ಎದುರುದಾರರ ಮಗನಿಗೆ ಶ್ರೀ ನಾರಾಯಣ ಶೆಟ್ಟಿರ ಮನೆಯವರೆಗೆ ಓಣಿಯನ್ನು, ರಸ್ತೆಯಾಗಿ ಪರಿವರ್ತಿಸುವುದಕ್ಕೆ ರೂ.20,000/- ಅನ್ನು ನೀಡಿರುತ್ತೀರೆಂದು, ತೆರಿಗೆ ವಸೂಲಾತಿ ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತೀರೆಂದು, ಹಾಗೂ ಸಿ.ಎ.ಬ್ಯಾಂಕ್, ಬೇಳೂರು ಇಲ್ಲಿನ ಪಂಚಾಯಿತಿ ಖಾತೆಯಲ್ಲಿ ಅವ್ಯವಹಾರ ನಡೆಸಿ ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ದುರ್ನಡತೆ ಎಸಗಿರುತ್ತೀರಿರೆಂದು ತಿಳಿಸಿರುತ್ತಾರೆ.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮಂಜು, ಕಾರ್ಯದರ್ಶಿ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಮಂಜು, ಕಾರ್ಯದರ್ಶಿ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ " ಮೂರು ವಾರ್ಷಿಕ ಬಡ್ತಿಯನ್ನು ಐದು ವರ್ಷಗಳ ಅವಧಿಗೆ ತಿರಸ್ಕರಿಸಿ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ

ಈ ಸಂಬಂಧ ಶ್ರೀ ಮಂಜು, ಕಾರ್ಯದರ್ಶಿ, ಬೇಳೂರು ಗ್ರಾಮ ಪಂಚಾಯತಿ (ಹಾಲಿ ಕೋಟಾ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಯಾವುದೇ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಆದ್ದರಿಂದ ವಿಚಾರಣಾಧಿಕಾರಿಯವರು ನಾಡಿಯುಪ ಆರೋಪವನ್ನು ಒಪ್ಪಿಕೊಂಡಂತಾಗಿದೆ ಹಾಗೂ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿರುತ್ತಾರೆ ಮತ್ತು ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ಮಂಜು, ಕಾರ್ಯದರ್ಶಿ, ರವರಿಗೆ "ಮೂರು ವಾರ್ಷಿಕ ಬಡ್ತಿಯನ್ನು ಐದು ವರ್ಷಗಳ ಅವಧಿಗೆ ತಿರಸ್ಕರಿಸಿ" ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ ಎಲ್ಲಾ ಅಂಶಗಳನ್ನು ಹಿನ್ನೆಲೆಯಲ್ಲಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಮೂರು ವಾರ್ಷಿಕ ಬಡ್ತಿಯನ್ನು ಐದು ವರ್ಷಗಳ ಅವಧಿಗೆ ತಿರಸ್ಕರಿಸಿ" ದಂಡನೆ ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 138 ಗ್ರಾಪಂಕಾ 2016 ಬೆಂಗಳೂರು, ದಿನಾಂಕ-12-07-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಮಂಜು, ಕಾರ್ಯದರ್ಶಿ, ಬೇಳೂರು ಗ್ರಾಮ ಪಂಚಾಯತಿ (ಹಾಲಿ ಕೋಟಾ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಮೂರು ವಾರ್ಷಿಕ ಬಡ್ತಿಯನ್ನು ಐದು ವರ್ಷಗಳ ಅವಧಿಗೆ ತಿರಸ್ಕರಿಸಿ" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ.
7. ಶ್ರೀ ಮಂಜು, ಕಾರ್ಯದರ್ಶಿ, ಕೋಟಾ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.